**MARCH 16,2025**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

**ರಾಜ್ಯದಲ್ಲಿ ಜಾನಪದ ಸಂಸ್ಕೃತಿಯು ಶ್ರೀಮಂತವಾಗಿದೆ.** ಎಲ್ಲ ಕಲೆ, ಸಾಹಿತ್ಯ, ಸಂಸ್ಕೃತಿ, ಪರಂಪರೆಯ ತಾಯಿಬೇರು ಜಾನಪದವಾಗಿದೆ ಎಂದು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಖಾತೆ ಸಚಿವ ಈಶ್ವರ ಬಿ.ಖಂಡ್ರೆ ಹೇಳಿದರು. ಬೀದರ ನಗರದ ರಂಗಮಂದಿರದಲ್ಲಿ, ಆಯೋಜಿತವಾದ ಕರ್ನಾಟಕ ಜಾನಪದ ಅಕಾದೆಮಿ 2023–24 ನೇ ಸಾಲಿನ ಗೌರವ ಪ್ರಶಸ್ತಿ, ತಜ್ಞ ಪ್ರಶಸ್ತಿ ಹಾಗೂ ಪುಸ್ತಕ ಬಹುಮಾನ ವಿತರಣಾ ಸಮಾರಂಭದಲ್ಲಿ ವರ್ಚುವಲ್ ಮಾಧ್ಯಮದ ಮೂಲಕ ಭಾಗವಹಿಸಿ ಅವರು ಮಾತನಾಡಿದರು. ಕಲ್ಯಾಣ ಕರ್ನಾಟಕ ಭಾಗದ ಎಲ್ಲ ಜಾನಪದ ಸಾಹಿತಿ ಹಾಗೂ ಕಲಾವಿದರ ಕಾರ್ಯಕ್ರಮಗಳಿಗೆ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಮೂಲಕ ಸೂಕ್ತ ಅನುದಾನ ನೀಡುವುದಾಗಿ ಅವರು ತಿಳಿಸಿದರು.

<><><>

**ರಾಯಚೂರು ಜಿಲ್ಲೆಯಲ್ಲಿ ಆರೋಗ್ಯ** ಸೇವೆಗಳನ್ನು ಹೆಚ್ಚಿಸಲು ಮತ್ತು ಪ್ರತಿಯೊಬ್ಬರಿಗೂ ಗುಣಮಟ್ಟದ ಚಿಕಿತ್ಸೆ ದೊರೆಯುವಂತೆ ಮಾಡಲು, ಜಿಲ್ಲೆಗೆ ಎಂಟು ನೂತನ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ನೀಡಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ದಿನೇಶ ಗುಂಡೂರಾವ್ ಹೇಳಿದರು. ಮಾನ್ವಿಯಲ್ಲಿ ಜರುಗಿದ ಬೃಹತ್ ಉಚಿತ ಆರೋಗ್ಯ ಮೇಳ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

<><><>

**ಕೋಲಾರ ಜಿಲ್ಲೆಯ ಕೆ.ಜಿ.ಎಫ್ ಮತ್ತು ಬಂಗಾರಪೇಟೆ ತಾಲೂಕಿನ ಮಧ್ಯ ಭಾಗದಲ್ಲಿ** ಸುಮಾರು 300 ಎಕರೆ ಜಾಗದಲ್ಲಿ, ಇಂಟಿಗ್ರೇಟೆಡ್ ಟೌನ್ ಶಿಪ್ ನಿರ್ಮಾಣ ಮಾಡಲು ನಗರಾಭಿವೃದ್ಧಿ ಇಲಾಖೆಯಿಂದ ಜಮೀನು ಮಂಜೂರಾಗಿದೆ ಎಂದು ಕೋಲಾರ ಜಿಲ್ಲಾ ಉಸ್ತುವಾರಿ ಸಚಿವ ಬಿ.ಎಸ್.ಸುರೇಶ್ ತಿಳಿಸಿದ್ದಾರೆ. ಟೌನ್ ಶಿಪ್ ನಿರ್ಮಾಣಕ್ಕೆ ಸ್ಥಳ ಪರಿಶೀಲನೆ ನಡೆಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾವಿರಾರು ಕೋಟಿ ವೆಚ್ಚದಲ್ಲಿ ಇಂಟಿಗ್ರೇಟೆಡ್ ಟೌನ್ ಶಿಪ್ ನಿರ್ಮಾಣ ಮಾಡುತ್ತಿರುವ ಸ್ಥಳ ಚೆನ್ನೈ ಎಕ್ಸ್ ಪ್ರೆಸ್ ಹೈವೇಗೆ ಒಂದು ಕಿಲೋಮೀಟರ್ ಅಂತರದಲ್ಲಿದೆ. ಈ ಯೋಜನೆಯಿಂದ ಸಾವಿರಾರು ಜನರಿಗೆ ಉದ್ಯೋಗ ಸೌಲಭ್ಯ ದೊರೆಯಲಿದೆ ಎಂದರು.

<><><>

**ಕರ್ನಾಟಕ ಕೊಡವ ಸಾಹಿತ್ಯ ಅಕಾದೆಮಿಯ,** 2022–23 ಮತ್ತು 2023–24 ನೇ ಸಾಲಿನ ವಾರ್ಷಿಕ ಪ್ರಶಸ್ತಿಗೆ 6 ಜನ ಸಾಧಕರನ್ನು ಆಯ್ಕೆ ಮಾಡಲಾಗಿದೆ ಎಂದು ಅಕಾದೆಮಿ ಅಧ್ಯಕ್ಷ ಅಜ್ಜಿನಿಕಂಡ ಸಿ.ಮಹೇಶ್ ನಾಚಯ್ಯ ತಿಳಿಸಿದ್ದಾರೆ. ಮಡಿಕೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು ಮಾರ್ಚ್ 29 ಹಾಗೂ 30 ರಂದು ಅಮ್ಮತ್ತಿಯ ಕೊಡವ ಸಮಾಜದಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ ಎಂದು ಹೇಳಿದರು.

<><><>

**ಅಟ್ಲಾಂಟಿಕ್ ಮಹಾಸಾಗರವನ್ನು ಸತತ** 52 ದಿನಗಳ ಕಾಲ ಏಕಾಂಗಿಯಾಗಿ ರೋವಿಂಗ್ ಮಾಡುತ್ತಾ ದಾಟಿ ಹೊಸ ದಾಖಲೆ ನಿರ್ಮಿಸಿದ ಅನನ್ಯ ಪ್ರಸಾದ್ ಅವರು ಬೆಂಗಳೂರಿನ ಕಾವೇರಿ ನಿವಾಸದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದರು. ಅನಾಥ ಮಕ್ಕಳಿಗೆ ಶಿಕ್ಷಣ ನೀಡುವ ಸಲುವಾಗಿ ಹಾಗೂ ಚಾಮರಾಜನಗರ – ರಾಮಸಮುದ್ರದ ದೀನಬಂಧು ಶಾಲೆಯ ಮಕ್ಕಳ ಭವಿ ್ಯಕ್ಕಾಗಿ, ಸಾಧನೆ ಮಾಡಿರುವ ಅನನ್ಯ ಪ್ರಸಾದ್ ಅವರ ಕಾಳಜಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶ್ಲಾಘಿಸಿದ್ದಾರೆ. ರೋವಿಂಗ್ ಸಾಧಕಿ ಅನನ್ಯ ಪ್ರಸಾದ್, ರಾ ್ಟ್ರಕವಿ ಜಿ.ಎಸ್.ಶಿವರುದ್ರಪ್ಪ ಅವರ ಮೊಮ್ಮಗಳು.

<><><>

**ನೂರು ವ ್ಷ ಪೂರೈಸಿರುವ ಸರ್ಕಾರಿ ಶಾಲೆಗಳಿಗೆ ರಾಜ್ಯ ಸರ್ಕಾರ ವಿಶೇ ್** ಕಾರ್ಯಕ್ರಮ ರೂಪಿಸಿ ಅನುದಾನ ನೀಡಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ಹಾವೇರಿ ಜಿಲ್ಲೆಯ ಬ್ಯಾಡಗಿ ತಾಲೂಕಿನ ಕೆರವಡಿ ಗ್ರಾಮದ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ಶತಮಾನೋತ್ಸವ ಹಾಗೂ ಗುರುವಂದನೆ ಮತ್ತು ಸ್ನೇಹ

ಸಮ್ಮಿಲನ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಒಂದು ಶಿಕ್ಷಣ ಸಂಸ್ಥೆಗೆ ನೂರು ವರ್ಷ ಆಗುವುದು ಇತಿಹಾಸ ನಿರ್ಮಾಣ ಮಾಡಿದಂತೆ, ಇಲ್ಲಿನ ಶಿಕ್ಷಕರು ಹಾಗೂ ಹಳೆಯ ವಿದ್ಯಾರ್ಥಿಗಳು ಯಶಸ್ಸು ಕಂಡಿದ್ದಾರೆ. ಅವರಿಗೂ ಅಭಿನಂದನೆಗಳು ಎಂದು ಹೇಳಿದರು

<><><>

**ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ** ಪ್ರಧಾನಮಂತ್ರಿ ನರೇಂದ್ರ ಮೋದಿ, ಇದೇ ಮಾರ್ಚ್ 30ರ ಭಾನುವಾರ ಬೆಳಗ್ಗೆ 11 ಗಂಟೆಗೆ ದೇಶ–ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಜನತೆ ತಮ್ಮ ಸಲಹೆಗಳು ಹಾಗೂ ಅಭಿಪ್ರಾಯಗಳನ್ನು, ನಮೋ ಆ್ಯಪ್ ಅಥವಾ My Gov.in ಜಾಲತಾಣದ ಮೂಲಕ ಹಂಚಿಕೊಳ್ಳಲು ಇದೇ 28 ಕೊನೆಯ ದಿನವಾಗಿದೆ.

<><><>

**ವಿಜಯಪುರ ಜಿಲ್ಲೆ, ತಿಕೋಟಾ ತಾಲೂಕಿನ** ಟಕ್ಕಳಕಿ ಗ್ರಾಮದಲ್ಲಿ ಬಿಜಾಪುರ ತೋಟಗಾರಿಕೆ ರೈತ ಉತ್ಪಾದಕರ ಕಂಪನಿ ನಿಯಮಿತ ವತಿಯಿಂದ ಆಯೋಜಿಸಲಾದ, ರೈತ ಸಮಾವೇಶವನ್ನು ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ ಪಾಟೀಲ್ ಉದ್ಘಾಟಿಸಿದರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.**

<><><>